



ದಿನಾಂಕ: 26-01-2024 ರಂದು 75ನೇ ಗಣರಾಜ್ಯೋತ್ಸವದ ಪ್ರಯುಕ್ತ ಬೆಂಗಳೂರಿನ ಶಾಸಕರ ಭವನದಲ್ಲಿ ಗೌರವಾನ್ವಿತ ಸಭಾಪತಿಗಳಾದ ಬಸವರಾಜ್ ಹೊರಟ್ಟಿ ಅವರು ಧ್ವಜಾರೋಹಣ ನೆರವೇರಿಸಿದರು.

ಇದೇ ಸಂದರ್ಭದಲ್ಲಿ ನಾಡಿನ ಸಮಸ್ತ ಜನತೆಗೆ 75ನೇ ಗಣರಾಜ್ಯೋತ್ಸವದ ಶುಭಾಶಯಗಳನ್ನು ಕೋರುತ್ತಾ, ನಮ್ಮ ಹಕ್ಕುಗಳ ಜನನಿ ಸಂವಿಧಾನ ಡಾ. ಬಿ .ಆರ್ ಅಂಬೇಡ್ಕರ್ ಅವರ ರಚಿಸಿದ ಸಂವಿಧಾನವನ್ನು ಅಂಗೀಕರಿಸಿಕೊಂಡ 75ನೇ ವರ್ಷ ಅಂಗವಾಗಿ ಆಚರಿಸುತ್ತಿರುವ ಈ ದಿನ ಭಾರತೀಯರ ಪಾಲಿಗೆ ಅತ್ಯಂತ ಮಹತ್ವವಾದದ್ದು. ಸಂವಿಧಾನದ ಆಶಯಗಳು ಪ್ರತಿಯೊಬ್ಬ ಕಟ್ಟಕಡೆಯ ಪ್ರಜೆಗೂ ಸಿಗುವಂತಾಗಬೇಕು ಅಂದಾಗ ಮಾತ್ರ ಇಂಥ ಆಚರಣೆಗಳಿಗೆ ಮೌಲ್ಯ ಬರುತ್ತದೆ ಆ ದಿಕ್ಕಿನತ್ತ ಪ್ರತಿಯೊಬ್ಬರು ಶ್ರಮಿಸೋಣ ಎಂದು ಸಭಾಪತಿ ಬಸವರಾಜ್ ಹೊರಟ್ಟಿಯವರು ಹೇಳಿದರು. ಈ ಸಂದರ್ಭದಲ್ಲಿ ವಿಧಾನಸಭೆಯ ಹಾಗೂ ವಿಧಾನ ಪರಿಷತ್ತಿನ ಕಾರ್ಯದರ್ಶಿಗಳಾದ ಶ್ರೀಮತಿ .ವಿಶಾಲಾಕ್ಷಿ ಶ್ರೀಮತಿ. ಮಹಾಲಕ್ಷ್ಮಿ ಸೇರಿದಂತೆ ಉಭಯ ಸದನಗಳ ಹಿರಿಯ ಅಧಿಕಾರಿಗಳು ಸಿಬ್ಬಂದಿ ವರ್ಗ, ಶಾಸಕರ ಭವನದ ಸಿಬ್ಬಂದಿ ಮುಂತಾದವರು ಉಪಸ್ಥಿತರಿದ್ದರು.